**ಕರ್ನಾಟಕ ಸರ್ಕಾರ**

**(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)**

ಸಂಖ್ಯೆ:ಕಪಂರಾಅ/ಪಂ.ರಾಜ್/175/2020-21

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:08.01.2021.

**ಇವರಿಗೆ,**
ರಾಜ್ಯದ ಎಲ್ಲಾ
1. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು
2. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು
3. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಡಿಜಿಟಲೀಕರಣಗೊಳಿಸುವ ಬಗ್ಗೆ.

*******

ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಉನ್ನತೀಕರಣಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮುಂದಾಗಿದೆ. ಮುಂದುವರಿದು ರಾಜ್ಯದ 5633 ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಉನ್ನತೀಕರಿಸುವ ಹಾಗೂ ಡಿಜಿಟಲ್ ಗ್ರಂಥಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಮೂಲಕ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ, ಯುವಕ ಯುವತಿಯರಿಗೆ, ಮಾಹಿತಿ ಮತ್ತು ಸಂವಹನ ಸೇವೆಯನ್ನು ಒದಗಿಸುವ ಮೂಲಕ ಅವರುಗಳಿಗೆ ಅಭಿವೃದ್ಧಿ ಹೊಂದಿದ ನಗರ ಪ್ರದೇಶದ ನಿವಾಸಿಗಳಿಗೆ ದೊರೆಯುತ್ತಿರುವ ಉತ್ತಮ ಶೈಕ್ಷಣಿಕ ಮಾಹಿತಿಗೆ ಸರಿ ಸಮಾನವಾದ ಸೌಲಭ್ಯಗಳನ್ನು ಗ್ರಾಮೀಣ ಪ್ರದೇಶಗಳಲ್ಲಿಯೂ ಒದಗಿಸುವುದು ಮುಖ್ಯವಾಗಿರುತ್ತದೆ. ಹಾಗೂ ಅವರ ಶೈಕ್ಷಣಿಕ ಮತ್ತು ಬೌದ್ಧಿಕ ಮಟ್ಟವನ್ನು ವೃದ್ಧಿಸುವ ಗ್ರಂಥಾಲಯಗಳ ಸ್ಥಾಪನೆ ಹಾಗೂ ಉನ್ನತೀಕರಣದ ಅಗತ್ಯ ಇದೆ.

ಕೋವಿಡ್-19 ಪರಿಣಾಮದಿಂದಾಗಿ ಶೈಕ್ಷಣಿಕ ವ್ಯವಸ್ಥೆಗೆ ಬಹಳ ಹಿನ್ನಡೆಯಾಗಿದ್ದು ಇಂಥಹ ಸಮಯದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯು "ಕರ್ನಾಟಕ ಡಿಜಿಟಲ್ ಸಾರ್ವಜನಿಕ ಗ್ರಂಥಾಲಯ" ಸ್ಥಾಪಿಸಿದ್ದು, ಈ ಜಾಲತಾಣದ ಮೂಲಕ ರಾಜ್ಯದ 30 ಜಿಲ್ಲಾ ಕೇಂದ್ರ ಗ್ರಂಥಾಲಯ, 216 ತಾಲ್ಲೂಕು ಗ್ರಂಥಾಲಯ, 26 ನಗರ ಕೇಂದ್ರ ಗ್ರಂಥಾಲಯ ಸೇರಿ 272 ಕೇಂದ್ರದಲ್ಲಿ ಡಿಜಿಟಲ್ ಗ್ರಂಥಾಲಯ ಸೇವೆಯನ್ನು ಒದಗಿಸುವ ಮೂಲಕ ರಾಜ್ಯದ ಜನತೆಗೆ ವಿದ್ಯಾವಂತ ಯುವಕರಿಗೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಮಾಡಿಕೊಳ್ಳುವಲ್ಲಿ ಸಹಕಾರಿ ಆಗುತ್ತಿದೆ. ಇದೇ ರೀತಿ ಗ್ರಾಮೀಣ ಪ್ರದೇಶದಲ್ಲಿಯ ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಡಿಜಿಟಲೀಕರಣಗೊಳಿಸಲು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಸೇವೆಯನ್ನು ಪಡೆಯಬಹುದಾಗಿರುತ್ತದೆ. ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಡಿಜಿಟಲೀಕರಣಗೊಳಿಸಲು ಅನುಸರಿಸಬೇಕಾದ ಕ್ರಮಗಳ ಕುರಿತು ಈ ಪತ್ರದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ವಿವರಿಸಲಾಗಿದೆ. ಗ್ರಂಥಾಲಯಗಳನ್ನು ಡಿಜಿಟಲೀಕರಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ ಮತ್ತು ಈ ಸಂಬಂಧ ತಗಲುವ ವೆಚ್ಚವನ್ನು ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹಿಸಲಾಗುವ ಗ್ರಂಥಾಲಯ ಕರದಿಂದ, 15ನೇ ಹಣಕಾಸು ಯೋಜನೆಯಿಂದ ಅಥವಾ ಗ್ರಾಮ ಪಂಚಾಯಿತಿ ಸ್ವಂತ ನಿಧಿಯಿಂದ ಭರಿಸುವಂತೆ ತಿಳಿಸಿದೆ.

ತಮ್ಮ ವಿಶ್ವಾಸಿ

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**<u>ಪ್ರತಿಯನ್ನು/ಸೂಕ್ತ ಕ್ರಮಕ್ಕಾಗಿ .</u>**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, , ಇವರ ಆಪ್ತ ಕಾರ್ಯದರ್ಶಿ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,ಇವರ ಆಪ್ತ ಸಹಾಯಕರು.
4. ನಿರ್ದೇಶಕರು, (ಪಂಚಾಯತ್ ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಮೂಖಾಂತರ).
6. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯವರ ಮೂಖಾಂತರ).
7. ಕಛೇರಿ ಪ್ರತಿ.

## ಅನುಬಂಧ

ಸಾರ್ವಜನಿಕ ಗ್ರಂಥಾಲಯ ಇಲಾಖೆಯ (www.karnatakadigitalpubliclibrary.org) ಜಾಲತಾಣದಲ್ಲಿ ಮತ್ತು ಇ-ಸಾರ್ವಜನಿಕ ಗ್ರಂಥಾಲಯ ಆ್ಯಪ್‌ನ ಮೂಲಕ ಇ-ಪುಸ್ತಕಗಳು, ಶೈಕ್ಷಣಿಕ ವೀಡಿಯೋಗಳು ಲಭ್ಯವಿರುವುದರಿಂದ ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲು ಸಹಕಾರಿ ಆಗಲಿದೆ. ಈ ಮೂಲಕ ಗ್ರಾಮೀಣ ಪ್ರದೇಶದ ಮಕ್ಕಳಿಗೆ, ಯುವಕ ಯುವತಿಯರಿಗೆ ಹಾಗೂ ನಾಗರೀಕರಿಗೆ ಜ್ಞಾನ ಅಭಿವೃದ್ಧಿಗೆ ಬಹಳ ಅನುಕೂಲವಾಗಲಿದೆ. ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳಾಗಿ ಮೇಲ್ದರ್ಜೆಗೇರಿಸಲು ಪ್ರತಿ ಗ್ರಂಥಾಲಯಕ್ಕೆ ಈ ಕೆಳಗಿನಂತೆ ಕ್ರಮವಹಿಸಲು ಸೂಚಿಸಿದೆ.

1. ಕನಿಷ್ಠ 02 ಗಣಕ ಯಂತ್ರಗಳು (ಗ್ರಂಥಾಲಯದಲ್ಲಿನ ಸ್ಥಳದ ವ್ಯವಸ್ಥೆ, ಚಂದಾದಾರರ ಬೇಡಿಕೆ ಅನುಸಾರ ಗಣಕ ಯಂತ್ರಗಳನ್ನು ಹೆಚ್ಚಿಸಬಹುದು.)
2. ಯುಪಿಎಸ್ ವ್ಯವಸ್ಥೆ(1 ರಿಂದ 2 ಕೆವಿಯವರೆಗೆ)
3. ವೈಫೈ ರೌಟರ್ ಮತ್ತು ಮೋಡಮ್, ಜಾಲತಾಣದ ವ್ಯವಸ್ಥೆ.
4. ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇ-ಪುಸ್ತಕಗಳು ಮತ್ತು ಶೈಕ್ಷಣಿಕ ವೀಡಿಯೋಗಳನ್ನು www.karnatakadigitalpubliclibrary.org ಜಾಲತಾಣದಲ್ಲಿ ಪಡೆಯಬಹುದಾಗಿದೆ. ಬೇರ ಯಾವುದೇ ಡಿಜಿಟಲ್ ಕಂಟೆಂಟ್ ಖರೀದಿ ಮಾಡುವುದು ನಿರ್ಬಂಧಿಸಲಾಗಿದೆ.
5. ಇ-ಪುಸ್ತಕಗಳು ಮತ್ತು ಶೈಕ್ಷಣಿಕ ವೀಡಿಯೋಗಳನ್ನು ಮೊಬೈಲ್ ಆ್ಯಪ್ e-Sarvajanika Granthalaya ನಲ್ಲಿಯೂ ಸಹ ಪಡೆಯಬಹುದಾಗಿದೆ.
6. ಕರ್ನಾಟಕ ಡಿಜಿಟಲ್ ಗ್ರಂಥಾಲಯಕ್ಕೆ ನೋಂದಣಿಯಾಗುವ ವಿಧಾನ (**Process to Register in the Karnataka Public Library)**

- Open Google Chrome and typewww.karnatakadigitalpubliclibrary.org
- Select Login/Register button
- Click on "Create now"
- Enter name, mobile number, email id and select a library from dropdown menu (Selection of Library is a MUST for registration process) and click on sign up
- Enter OTP received in your mobile.
- Set your password (Only 4 character) and click on sign up button.
- Now you may login, using your mobile number and password.